**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 20/2024**

**ಚಾ.ಸಾ. :- 14**
**ಪ್ರಾ.ಸಾ. :- 04**

| | | |
|---|---|---|
| ಹೆಸರು | : | ಬಿ.ಆರ್.ಕೃಷ್ಣ |
| ತಂದೆಯ ಹೆಸರು | : | ಬಿ.ಡಿ.ರಾಮಶೆಟ್ಟಿ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ವ್ಯಾಪಾರ |
| ವಾಸಸ್ಥಳ | : | ವಿಜಯನಗರ, ಮೈಸೂರು. |

**ಪ್ರಮಾಣೀಕರಿಸಲಾದ ದಿನಾಂಕಃ- 04.08.2025.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-3(ಬಿ)** ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದಲ್ಲಿ ಮಾಡಿರುತ್ತೇನೆ.

ಈಗ ನೋಡುತ್ತಿರುವ ಇನ್ನೊಂದು ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-4(ಬಿ)** ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು

ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಪೊಲೀಸ್ ಠಾಣಾ ಆವರಣದಲ್ಲಿ ಮಾಡಿರುತ್ತೇನೆ. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ಸಾಕ್ಷಿಯು ನಿಪಿ-11 ರಿಂದ 14 ನ್ನು ನೋಡಿ ವಾಹನಗಳನ್ನು ಗುರುತಿಸಿರುತ್ತಾರೆ. ನಿಪಿ-5 ಮತ್ತು 6 ನ್ನು ನೋಡಿ ಸ್ಥಳವನ್ನು ಗುರುತಿಸಿರುತ್ತಾರೆ.

**ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಯಾವುದೇ ಸಕಾರಣಗಳು ಕಂಡು ಬರದೇ ಇದ್ದುದರಿಂದ ಸದರಿಯವರ ಪ್ರಾರ್ಥನೆಯನ್ನು ತಿರಸ್ಕರಿಸಿ, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**